ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಮುಖ್ಯ ಮಂತ್ರಿಗಳ ಗ್ರಾಮವಿಕಾಸ ಯೋಜನೆಗಳ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):-

297 (321) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19 ರಿಂದ ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಗಳನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು;

(ಆ) ರಾಜ್ಯದಲ್ಲಿ 2017-18ರಲ್ಲಿ ಗ್ರಾಮವಿಕಾಸ ಯೋಜನೆ ಅನ್ವಯ ಎಷ್ಟು ಗ್ರಾಮಗಳಿಗೆ ಅನುದಾನ ನೀಡಲಾಗಿದೆ; ಇದಕ್ಕೆ ಬಿಡುಗಡೆಗೊಳಿಸಿರುವ ಹಣವೆಷ್ಟು; ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಇ) ಈ ಯೋಜನೆಗೆ ಕನಿಷ್ಠ ಎರಡು ಲಕ್ಷ ಅನುದಾನ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ;

(ಈ) 2017-18ರ ಯೋಜನೆಗೆ ಹಣ ಬಿಡುಗಡೆ ಮಾಡದೇ ಕಾಮಗಾರಿಗಳು ವಿಳಂಬಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) 2017-18ರಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; ಬಾಕಿ ಇರುವ ಅನುದಾನ ಎಷ್ಟು? (ವಿವರ ನೀಡುವುದು)